ನಮ್ಮ ಈ ವಿಷಯದಲ್ಲಿ (ಧರ್ಮದಲ್ಲಿ) ಅದರಲ್ಲಿಲ್ಲದ ಒಂದನ್ನು ಯಾರಾದರೂ ಆವಿಷ್ಕರಿಸಿದರೆ, ಅದು ತಿರಸ್ಕೃತವಾಗಿದೆ

ಆಯಿಶ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಮ್ಮ ಈ
ವಿಷಯದಲ್ಲಿ (ಧರ್ಮದಲ್ಲಿ) ಅದರಲ್ಲಿಲ್ಲದ ಒಂದನ್ನು ಯಾರಾದರೂ ಆವಿಷ್ಕರಿಸಿದರೆ, ಅದು ತಿರಸ್ಕೃತವಾಗಿದೆ." [ಬುಖಾರಿ ಮತ್ತು ಮುಸ್ಲಿಂ]. ಮುಸ್ಲಿಂರ ವರದಿಯಲ್ಲಿ ಹೀಗಿದೆ: "ನಮ್ಮ ಆಜ್ಞೆಯಿಲ್ಲದ ಒಂದು ಕರ್ಮವನ್ನು ಯಾರಾದರೂ ನಿರ್ವಹಿಸಿದರೆ ಅದು ತಿರಸ್ಕೃತವಾಗಿದೆ." [صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಧರ್ಮದಲ್ಲಿ ಹೊಸದಾದ ಒಂದು ಕಾರ್ಯವನ್ನು ಯಾರಾದರೂ ಆವಿಷ್ಕರಿಸಿದರೆ, ಅಥವಾ ಕುರ್ಆನ್ ಮತ್ತು ಸುನ್ನತ್ನಲ್ಲಿ ಆಧಾರವಿಲ್ಲದ ಒಂದು ಕಾರ್ಯವನ್ನು ಮಾಡಿದರೆ, ಅದು ತಿರಸ್ಕೃತವಾಗಿದೆ. ಅಲ್ಲಾಹು ಅದನ್ನು ಸ್ವೀಕರಿಸುವುದಿಲ್ಲ.

http://www.sunnah.global/hadeeth/kn/show/4792